## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಅಲೆಮಾರಿ/ಅರೆಅಲೆಮಾರಿ ಜನಾಂಗದ ಮೆಟ್ರಿಕ್-ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನಕ್ಕಾಗಿ ನಿಗಧಿಪಡಿಸಿರುವ ಅನುದಾನದಲ್ಲಿ ಉಳಿತಾಯವಾಗುವ ಅನುದಾನವನ್ನು ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿವೇತನಕ್ಕಾಗಿ ವಿನಿಯೋಗಿಸುವ ಸಂಬಂಧ ಆಯುಕ್ತರ ಹೆಸರಿನಲ್ಲಿ ತೆರೆದಿರುವ ಎಸ್.ಬಿ. ಖಾತೆಗೆ ಜಮಾ ಮಾಡಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಕುರಿತು.

ಓದಲಾಗಿದೆ:-
1. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 28 ಬಿಎಂಎಸ್ 2022, ದಿನಾಂಕ:07.02.2022.
2. ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ಅಮಾಜ-2/ಸಿಆರ್-30/2020-21, ದಿನಾಂಕ:-02.03.2022.

****

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಆದೇಶದಲ್ಲಿ 2021-22ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ, ಶುಲ್ಕ ವಿನಾಯಿತಿ ಯೋಜನೆ, ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ(NT/SNT)ಗಳಿಗೆ ಆಯವ್ಯಯದಲ್ಲಿ ಒದಗಿಸಿದ ಅನುದಾನವನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಹೆಸರಿನಲ್ಲಿ ನಿಯಮಾನುಸಾರ ತೆರೆಯುವ ಹೊಸ ಬ್ಯಾಂಕ್ ಉಳಿತಾಯ ಖಾತೆಗೆ ಜಮಾ ಮಾಡಿ, ನಂತರ ಸದರಿ ಅನುದಾನವನ್ನು ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (ಎಸ್.ಎಸ್.ಪಿ) ಮುಖಾಂತರ ಕರೆಯಲಾಗಿರುವ ಅರ್ಜಿಗಳ ಅರ್ಹತೆಯಂತೆ ವಿದ್ಯಾರ್ಥಿಗಳಿಗೆ ನಿಯಮಾನುಸಾರ ನೇರವಾಗಿ ಅವರ ಆಧಾರ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಪಾವತಿಸಲು ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿರುತ್ತದೆ

ಮೇಲೆ ಓದಲಾದ (2)ರ ಆಯುಕ್ತರ ಪ್ರಸ್ತಾವನೆಯಲ್ಲಿ 2021-22ನೇ ಸಾಲಿನ ಆಯವ್ಯಯದಲ್ಲಿ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳ ವಿದ್ಯಾರ್ಥಿವೇತನ ಮಂಜೂರಾತಿ ಕಾರ್ಯಕ್ರಮಕ್ಕಾಗಿ ಅಲೆಮಾರಿ/ಅರೆಅಲೆಮಾರಿ ಅಭಿವೃದ್ಧಿ ಯೋಜನೆ ಲೆಕ್ಕಶೀರ್ಷಿಕೆ 2225-03-102-0-12 ರ ಅಬ್ಜೆಕ್ಟೀವ್ ಕೋಡ್-117 ರಡಿ ರೂ. 2600.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿರುತ್ತದೆ. 2021-22 ನೇ ಸಾಲಿನ ಕ್ರಿಯಾಯೋಜನೆಯನ್ನು ಈ ಅನುದಾನದಲ್ಲಿ ರೂ. 1900.00 ಲಕ್ಷಗಳನ್ನು ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳ ಮೆಟ್ರಿಕ್-ಪೂರ್ವ ವಿಶೇಷ ಪ್ರೋತ್ಸಾಹಧನಕ್ಕಾಗಿ ಹಾಗೂ ರೂ. 700.00 ಲಕ್ಷಗಳನ್ನು ಮೆಟ್ರಿಕ್-ನಂತರದ ಅರ್ಹತಾ ವಿದ್ಯಾರ್ಥಿವೇತನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಹಂಚಿಕೆ ಮಾಡಲಾಗಿರುತ್ತದೆ. 2021-22ನೇ ಸಾಲಿಗೆ ಮೆಟ್ರಿಕ್-ಪೂರ್ವ ವಿಶೇಷ ಪ್ರೋತ್ಸಾಹಧನ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕಾಗಿ ನಿಗದಿಪಡಿಸಲಾದ ರೂ. 1900.00 ಲಕ್ಷಗಳ

15/3/22

2..

ಅನುದಾನದಲ್ಲಿ ರೂ. 1444.28 ಲಕ್ಷಗಳ ಅನುದಾನವನ್ನು ನವೀಕರಣ ಹಾಗೂ ಹೊಸ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕೆ ವಿನಿಯೋಗಿಸಿದ ನಂತರ ರೂ. 455.72 ಲಕ್ಷಗಳ ಅನುದಾನವು ಉಳಿತಾಯವಾಗುತ್ತದೆ. ಸದರಿ ಉಳಿತಾಯವಾಗುವ ರೂ. 455.72 ಲಕ್ಷಗಳ ಅನುದಾನವನ್ನು ಮೆಟ್ರಿಕ್-ನಂತರದ ಅರ್ಹತಾ ವಿದ್ಯಾರ್ಥಿವೇತನ ಮಂಜೂರಾತಿಗೆ ವಿನಿಯೋಗಿಸಲು ಹಾಗೂ 2021-22 ನೇ ಸಾಲಿನ ಆರ್ಥಿಕ ವರ್ಷ ಕೊನೆಗೊಳ್ಳುತ್ತಿರುವುದರಿಂದ, ಸದರಿ ರೂ. 455.72 ಲಕ್ಷಗಳ ಅನುದಾನವನ್ನು ಖಜಾನೆಯಿಂದ ಡ್ರಾ ಮಾಡಿ, ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಹೆಸರಿನಲ್ಲಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಕನ್ನಿಂಗ್ ಹ್ಯಾಂ ರಸ್ತೆ ಶಾಖೆಯಲ್ಲಿ ತೆರೆಯಲಾಗಿರುವ ಬ್ಯಾಂಕ್ ಖಾತೆ ಸಂಖ್ಯೆ: 40774599571 (K-2 Recipient ID 0104106786) ಗೆ ಜಮಾ ಮಾಡಿ ನಂತರ ವಿದ್ಯಾರ್ಥಿವೇತನ ಪಾವತಿಸಲು ಅನುಮತಿ ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 158 ಬಿಎಂಎಸ್ 2022,**

**ಬೆಂಗಳೂರು, ದಿನಾಂಕ: 15.03.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2021-22ನೇ ಸಾಲಿಗೆ ಮೆಟ್ರಿಕ್-ಪೂರ್ವ ವಿಶೇಷ ಪ್ರೋತ್ಸಾಹಧನ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ನಿಗದಿಪಡಿಸಲಾದ ರೂ.1900.00ಲಕ್ಷಗಳ ಅನುದಾನದಲ್ಲಿ ಉಳಿತಾಯವಾಗುವ ರೂ.455.72ಲಕ್ಷಗಳ ಅನುದಾನವನ್ನು ಮೆಟ್ರಿಕ್-ನಂತರದ ಅರ್ಹತಾ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ವಿನಿಯೋಗಿಸಲು ಹಾಗೂ ಸದರಿ ಅನುದಾನವನ್ನು ಖಜಾನೆಯಿಂದ ಡ್ರಾ ಮಾಡಿ, ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಹೆಸರಿನಲ್ಲಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಕನ್ನಿಂಗ್ ಹ್ಯಾಂ ರಸ್ತೆ ಶಾಖೆಯಲ್ಲಿ ತೆರೆಯಲಾಗಿರುವ ಬ್ಯಾಂಕ್ ಖಾತೆ ಸಂಖ್ಯೆ: 40774599571 (K-2 Recipient ID 0104106786)ಗೆ ಜಮಾ ಮಾಡಿ ನಂತರ ಯೋಜನೆಯ ಅರ್ಜಿಗಳ ಆರ್ಹತೆಯಂತೆ ವಿದ್ಯಾರ್ಥಿಗಳಿಗೆ ನಿಯಮಾನುಸಾರ ನೇರವಾಗಿ ಅವರ ಆಧಾರ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಪಾವತಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

**ಷರತ್ತುಗಳು:**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಈ ರೀತಿ ಬ್ಯಾಂಕ್ ಖಾತೆಯಲ್ಲಿ ಜಮಾ ಮಾಡಿದ ಅನುದಾನವನ್ನು ಅರ್ಜಿಗಳ ಪ್ರಕ್ರಿಯೆ ಕರೆದು ಮುಗಿದ ನಂತರ ನಿಯಮಾನುಸಾರ ಬಳಸಿಕೊಳ್ಳಲು ಮತ್ತು ಈ ಅರ್ಜಿಗಳನ್ನು ಅಹ್ವಾನಿಸಿದ ಕೊನೆಯ ದಿನಾಂಕದಿಂದ 01 ತಿಂಗಳೊಳಗೆ ನಿಯಮಾನುಸಾರ ಬಳಸಿಕೊಳ್ಳತಕ್ಕದ್ದು ಹಾಗೂ ಬಾಕಿ ಉಳಿದ ಮೊತ್ತವನ್ನು ನಿಯಮಾನುಸಾರ ಆರ್ಥಿಕ ಇಲಾಖೆಯ ಪೂರ್ವಾನುಮತಿ ಪಡೆದು ರಾಜ್ಯದ ಏಕೀಕೃತ ನಿಧಿಗೆ ಜಮಾ ಮಾಡಬೇಕು. ಬಳಸಿಕೊಂಡ ಅನುದಾನವನ್ನು ಆಡಿಟ್ ಮಾಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.

15/03/22

3..